All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

28.11.2025 6.40 PM

***************

ಮುಖ್ಯಾಂಶಗಳು

- ಮಹಿಳೆಯರು ವೈಜ್ಞಾನಿಕ ಜ್ಞಾನ ಬೆಳೆಸಿಕೊಂಡಾಗ ಸಮಾಜ ಅಭಿವೃದ್ಧಿಯಾಗುತ್ತದೆ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಏರೋಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರದಲ್ಲಿ ಶೈಕ್ಷಣಿಕ ಒಪ್ಪಂದಗಳ ಅವಶ್ಯಕತೆ - ಭಾರತೀಯ ನೌಕಾಪಡೆಯ ನೌಕಾ ಶಸ್ತ್ರಾಸ್ತ್ರ ಮಹಾ ನಿರ್ದೇಶಕ
- ಹಾಸನದಲ್ಲಿ ೧೫೦ ಕೋಟಿ ರೂಪಾಯಿ ವೆಚ್ಚದ ವಿವಿಧ ಕಾಮಗಾರಿ ಪರಿಶೀಲಿಸಿದ ಸಚಿವ ಕೃಷ್ಣ ಬೈರೇಗೌಡ
- ಬೆಳಗಾವಿ - ಕಿತ್ತೂರು - ಧಾರವಾಡ ರೈಲು ಕಾಮಗಾರಿ ವಿಳಂಬಕ್ಕೆ ರಾಜ್ಯ ಸರ್ಕಾರ ಕಾರಣ - ಸಂಸದ ಜಗದೀಶ್ ಶೆಟ್ಟರ್ ಆರೋಪ

***************

ಮಹಿಳೆಯರು ಶೇಕಡ ನೂರರಷ್ಟು ಸಾಕ್ಷರತೆ ಸಾಧಿಸಲು ಅವರು ವೈಚಾರಿಕ, ವೈಜ್ಞಾನಿಕ ಜ್ಞಾನ ಬೆಳೆಸಿಕೊಂಡಾಗ ಸಮಾಜ ಅಭಿವೃದ್ಧಿಯಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಅವರು ಇಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಶೇಷಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ವತಿಯಿಂದ ಬೆಂಗಳೂರಿನ ಅರಮನೆ ಮೈದಾನದಲ್ಲಿ ಆಯೋಜಿಸಲಾಗಿದ್ದ ಕರ್ನಾಟಕದಲ್ಲಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಸುವರ್ಣ ಮಹೋತ್ಸವ ಹಾಗೂ ಮಕ್ಕಳ ದಿನಾಚರಣೆಯ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಹತ್ವಕಾಂಕ್ಷಿ ಯೋಜನೆಗಳನ್ನು ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಶಿಶು ಮರಣ, ತಾಯಂದಿರ ಅಪೌಷ್ಟಿಕತೆ ಮತ್ತು ಮರಣದಂತಹ ಗಂಭೀರ ಸಮಸ್ಯೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಇಂದಿರಾ ಗಾಂಧಿ ಶಿಶು ಅಭಿವೃದ್ಧಿ ಯೋಜನೆಯನ್ನು ಪ್ರಾರಂಭಿಸಿದ್ದರು. ಇಂದು ಕರ್ನಾಟಕದಲ್ಲಿ ಸುಮಾರು ೭೦ ಸಾವಿರ ಅಂಗನವಾಡಿ ಕೇಂದ್ರಗಳ ಮೂಲಕ ೪೦

ಲಕ್ಷಕ್ಕೂ ಹೆಚ್ಚು ಮಹಿಳೆಯರು ಮತ್ತು ಮಕ್ಕಳಿಗೆ ಸೇವೆಯನ್ನು ನೀಡಲಾಗುತ್ತಿದೆ ಎಂದು ಅವರು ಹೇಳಿದರು.

***ಧ್ವನಿ ***ಮುಖ್ಯಮಂತ್ರಿ

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರುಗಳಾದ ಲಕ್ಷ್ಮೀ ಹೆಬ್ಬಾಳ್ಕರ್, ಹೆಚ್.ಸಿ.ಮಹದೇವಪ್ಪ, ಕೆ.ಎಚ್.ಮುನಿಯಪ್ಪ, ಈಶ್ವರ ಖಂಡ್ರೆ ಸೇರಿದಂತೆ ಹಲವು ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

***************

ಏರೋಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರದ ಜತೆಗೆ ಶೈಕ್ಷಣಿಕ ಒಪ್ಪಂದಕ್ಕೆ ಸಹಕಾರ ನೀಡಲು ನಾವು ಸಿದ್ಧರಿರುವುದಾಗಿ ಭಾರತೀಯ ನೌಕಾಪಡೆಯ ನೌಕಾ ಶಸ್ತ್ರಾಸ್ತ್ರ ಮಹಾನಿರ್ದೇಶಕ ಪ್ರಕಾಶ ಉಪಾಧ್ಯಾಯರು ಹೇಳಿದರು.

ನಾಗರಭಾವಿಯಲ್ಲಿರುವ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಬೆಂಗಳೂರು ಪ್ರಾದೇಶಿಕ ಕಚೇರಿಗೆ ಭೇಟಿ ನೀಡಿ, ಮಾತನಾಡಿದ ಅವರು, "ಏರೋಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರದಲ್ಲಿ ಶೈಕ್ಷಣಿಕ ಒಪ್ಪಂದಗಳ ಅವಶ್ಯಕತೆ ಇದೆ ಎಂದು ಹೇಳಿದರು.

ವಿಟಿಯು ಸಂಶೋಧನೆ ಮತ್ತು ಅಭಿವೃದ್ಧಿ, ಏರೋಸ್ಪೇಸ್ ಮತ್ತು ರಕ್ಷಣಾ ನಿರ್ದೇಶಕ ಡಾ. ಕಮಾಂಡರ್ ದೇವೇಂದ್ರ ಸಿಂಗ್ ಮಾತನಾಡಿ, "ಶೈಕ್ಷಣಿಕ ಮತ್ತು ರಕ್ಷಣಾ ಇಲಾಖೆಯ ಅಗತ್ಯವನ್ನು ಹೆಚ್ಚಿಸಿದ್ದು, ಇದಕ್ಕೆ ರಕ್ಷಣಾ ಇಲಾಖೆಯ ಸಹಕಾರ ಅತ್ಯಗತ್ಯವಾಗಿದೆ. ಇದಕ್ಕಾಗಿ ವಿಟಿಯು ಮತ್ತು ಭಾರತೀಯ ನೌಕಾಪಡೆಯ ನಡುವೆ ಅಧಿಕೃತ ಶೈಕ್ಷಣಿಕ ಒಪ್ಪಂದ ಅಗತ್ಯವಿದೆ" ಎಂದರು.

***************

ಹಾಸನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಆವರಣದಲ್ಲಿ ಡಿಸೆಂಬರ್ ೬ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸುಮಾರು ೨೫೦ ಕೋಟಿ ರೂಪಾಯಿ ವೆಚ್ಚದ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದು, ಈ ಹಿನ್ನಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಅವರು ಇಂದು ಸ್ಥಳ ಪರಿಶೀಲನೆ ನಡೆಸಿದರು.

ಹಿಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ೫೫ ಕೋಟಿ ಅನುದಾನದ ಕಾಮಗಾರಿ, ಚನ್ನರಾಯಪಟ್ಟಣಕ್ಕೆ ೭೪ ಕೋಟಿ ರೂಪಾಯಿ ವೆಚ್ಚದ ನೀರಾವರಿ ಯೋಜನೆ, ಹಾಸನ ತಾಲೂಕು ಕಚೇರಿ, ಮೊರಾರ್ಜಿ ಶಾಲೆ ಸೇರಿದಂತೆ ಹಲವು ಕಾಮಗಾರಿಗಳನ್ನು ಮುಖ್ಯಮಂತ್ರಿ ಉದ್ಘಾಟಿಸಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಸಂಸದ ಶ್ರೇಯಸ್ ಎಂ. ಪಟೇಲ್, ಶಾಸಕ ಕೆ.ಎಂ. ಶಿವಲಿಂಗೇಗೌಡ, ಮಾಜಿ ಎಂ.ಎಲ್.ಸಿ. ಎಂ.ಎ. ಗೋಪಾಲಸ್ವಾಮಿ, ಜಿಲ್ಲಾಧಿಕಾರಿ ಕೆ.ಎಸ್. ಲತಾ ಕುಮಾರಿ, ಅಪರ ಜಿಲ್ಲಾಧಿಕಾರಿ ಬಿ.ಎ. ಜಗದೀಶ್, ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ಇತರರು ಉಪಸ್ಥಿತರಿದ್ದರು.

***************

ಬೆಳಗಾವಿ - ಕಿತ್ತೂರು - ಧಾರವಾಡ ಮಾರ್ಗದ ರೈಲ್ವೆ ಕಾಮಗಾರಿಗೆ ಕೇಂದ್ರ ೯೨೭ ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿದೆ. ಆದರೆ, ಈ ಯೋಜನೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಭೂಪರಿಹಾರ ನೀಡುವುವದನ್ನು ಬಾಕಿ ಉಳಿಸಿಕೊಂಡ ಕಾರಣ ಕಾಮಗಾರಿ ವಿಳಂಭವಾಗುತ್ತಿದೆ ಎಂದು ಸಂಸದ ಜಗದೀಶ್ ಶೆಟ್ಟರ ಆರೋಪಿಸಿದ್ದಾರೆ.

ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಘನತ್ಯಾಜ್ಯ ವಿಲೇವಾರಿ ಯೋಜನೆಗೆ ೧೩೫ ಕೋಟಿ ರೂಪಾಯಿ ಮಂಜೂರಾಗಿದ್ದರೂ ಯೋಜನೆಯು ಅನುಷ್ಠಾನಗೊಳ್ಳಲು ವಿಫಲವಾಗಿದೆ. ಅಮೃತ ಯೋಜನೆಯಡಿ ಬೆಳಗಾವಿ ತಾಲೂಕಿನ ಹಲಗಾ ಗ್ರಾಮದಲ್ಲಿ ೭೦ ಲಕ್ಷ ಲೀಟರ್ ಸಾಮರ್ಥ್ಯದ ನೀರಿನ ಟ್ಯಾಂಕ್ ನಿರ್ಮಾಣ ಕೂಡ ಅರ್ಧಕ್ಕೆ ನಿಂತಿದೆ. ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಕುಸಿದು ಹೋಗಿದೆ. ಅಭಿವೃದ್ಧಿ ಕೆಲಸಗಳು ಸ್ಥಗಿತಗೊಂಡಿವೆ. ಭ್ರಷ್ಟಾಚಾರ ಮಿತಿ ಮೀರಿದೆ ಎಂದು ಅವರು ಆರೋಪಿಸಿದ್ದಾರೆ.

***************

೧೨ನೇ ಶತಮಾನದ ಶರಣರು ಸಾರಿದ ಸಿದ್ಧಾಂತವು ಮಾನವ ಸಿದ್ಧಾಂತ, ಕಾಯಕತತ್ವ, ಸಮಾನತೆ, ತನು ಶುದ್ಧ, ಮನ ಶುದ್ಧ ಗುಣಗಳ ತತ್ವ-ಸಂದೇಶದ ಶರಣರಅನುಭವ ಮಂಟಪ ೨೧ನೇ ಶತಮಾನದಲ್ಲಿ ಮಾನವರು ಶಾಂತಿ, ಸೌಹಾರ್ದತೆಯಿಂದ ಬಾಳಲು ಮಾರ್ಗದರ್ಶನ ನೀಡಿರುವ ಸಿದ್ಧಾಂತವಾಗಿದೆ ಎಂದು ಸಿದ್ಧಗಂಗಾ ಮಠದ ಶಿವಸಿದ್ಧೇಶ್ವರ ಸ್ವಾಮೀಜಿ ಹೇಳಿದ್ದಾರೆ.

ಅಖಿಲ ಭಾರತ ವೀರಶೈವ ಮಹಾಸಭಾದ ರಾಜ್ಯಘಟಕದಿಂದ ನಡೆದ 'ಆನ್‌ಲೈನ್ ಅನುಭವ ಮಂಟಪ' ಎಂಬ ವೆಬ್‌ಸೈಟ್‌ಗೆ ಚಾಲನೆ ನೀಡಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಹಾಗೂ ಅರಣ್ಯ ಸಚಿವ ಈಶ್ವರ ಬಿ.ಖಂಡ್ರೆ, ರಾಜ್ಯಾಧ್ಯಕ್ಷ ಶಂಕರಬಿದರಿ, ಜಿಲ್ಲಾಧ್ಯಕ್ಷ ಡಾ.ಎಸ್.ಪರಮೇಶ್ ಸೇರಿದಂತೆ ಇತರರಿದ್ದರು.

***************

ನಾರ್ಕೋಟಿಕ್ ಡ್ರಗ್ಸ್ ಹಾಗೂ ಮಾದಕ ವಸ್ತುಗಳ ಮಾರಾಟ ಹಾಗೂ ಸೇವನೆಯ ಜಾಲ ದಿನದಿಂದ ದಿನಕ್ಕೆ ಹೆಚ್ಚಾಗಿ ಬೆಳೆಯುತ್ತಿದ್ದು, ಮಾದಕ ವಸ್ತುಗಳ ಸರಬರಾಜನ್ನು ತಡೆಗಟ್ಟಲು ಹಾಗೂ ಮಾದಕ ವಸ್ತುಗಳ ಮುಕ್ತ ಜಿಲ್ಲೆಯನ್ನಾಗಿ ಮಾಡಲು ಎಲ್ಲಾ ಅಧಿಕಾರಿಗಳು ಕೈ ಜೋಡಿಸಬೇಕು ಎಂದು ಮೈಸೂರಿನ ಹೆಚ್ಚುವರಿ ಪೊಲೀಸ್ ಅಧೀಕ್ಷಕ ನಾಗೇಶ್ ಅವರು ಹೇಳಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮಿಕೊಳ್ಳಲಾಗಿದ್ದ ನಾರ್ಕೋ ಸಮನ್ವಯ ಕೇಂದ್ರದ ಜಿಲ್ಲಾ ಮಟ್ಟದ ಜಿಲ್ಲಾ ಕಮಿಟಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

***************

ಕ್ರೀಡೆಯಲ್ಲಿ ಸೋಲು ಗೆಲುವು ಸಾಮಾನ್ಯ, ಆದ್ದರಿಂದ ಸೋಲು ಮತ್ತು ಗೆಲುವನ್ನು ಸಮಾನವಾಗಿ ಸ್ವೀಕರಿಸಿ ವಿವಿಧ ಕ್ರೀಡಾ ಸ್ಪರ್ಧೆಯಲ್ಲಿ ಪಾಲ್ಗೊಳ್ಳುವಂತಾಗಬೇಕು ಎಂದು ಮಡಿಕೇರಿ ಶಾಸಕರಾದ ಡಾ.ಮಂತರ್ ಗೌಡ ಅವರು ತಿಳಿಸಿದ್ದಾರೆ.

ರಾಜ್ಯ ಪದವಿಪೂರ್ವ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಮಡಿಕೇರಿ ನಗರದ ಜನರಲ್ ತಿಮ್ಮಯ್ಯ ಒಳಾಂಗಣ ಕ್ರೀಡಾಂಗಣದಲ್ಲಿಂದು ನಡೆದ ರಾಜ್ಯ ಮಟ್ಟದ ಪದವಿ ಪೂರ್ವ ಕಾಲೇಜು ಬಾಲಕರ ಮತ್ತು ಬಾಲಕಿಯರ ಶಟಲ್ ಬ್ಯಾಡ್ಮಿಂಟನ್ ಪಂದ್ಯಾವಳಿವನ್ನು ಉದ್ಘಾಟಿಸಿ ಅವರು ಮಾತನಾಡಿದರು.

***************

ತುಮಕೂರು ಜಿಲ್ಲೆಯಲ್ಲಿ ಜಿಲ್ಲೆಯಲ್ಲಿ ಕರ್ನಾಟಕ ಆಗ್ನೇಯ ಪದವೀಧರ ಕ್ಷೇತ್ರ ಚುನಾವಣೆಗೆ ಸಂಬಂಧಿಸಿದಂತೆ ಮತದಾರರ ಪಟ್ಟಿಗೆ ಒಟ್ಟು ೪೦ ಸಾವಿರದ ೫೯೧ ಹೊಸ ಮತದಾರರು ಸೇರ್ಪಡೆಯಾಗಿದ್ದಾರೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಈ ಕರಡು ಪಟ್ಟಿಯಲ್ಲಿ ಸೇರ್ಪಡೆ ಹಾಗೂ ತಿರಸ್ಕೃತವಾಗಿರುವ ಪದವೀಧರರ ಅರ್ಜಿಗಳನ್ನು ಪುನಃ ಪರಿಶೀಲಿಸಲು ಅವಕಾಶ ಕಲ್ಪಿಸಲಾಗಿದ್ದು, ಯಾವುದೇ ಮಾಹಿತಿ ತಿದ್ದುಪಡಿ ಅಥವಾ ಪೂರಕ ದಾಖಲೆಗಳ ತಿದ್ದುಪಡಿ ಮಾಡಿಸಲು ಹಾಗೂ ಹೊಸದಾಗಿ ನೋಂದಾಯಿಸಿಕೊಳ್ಳಲು ಡಿಸೆಂಬರ್ ೧೦ರ ವರೆಗೆ ಕಾಲಾವಕಾಶ ನೀಡಲಾಗಿದೆ ಎಂದು ತಿಳಿಸಿದ್ದಾರೆ.

***************

ರಾಷ್ಟ್ರೀಯ ಹೆದ್ದಾರಿ ಯೋಜನೆಯಡಿ ಆಂಧ್ರಪ್ರದೇಶದ ಗುತ್ತಿ ಮತ್ತು ಕರ್ನಾಟಕದ ಅಂಕೋಲ ನಡುವಿನ ರಾಷ್ಟ್ರೀಯ ಹೆದ್ದಾರಿ ೬೩ಕ್ಕೆ ಬಳ್ಳಾರಿ ನಗರದ ಬಳಿ ಕೇಂದ್ರ ಸರ್ಕಾರದ ರಾಷ್ಟ್ರೀಯ

ಹೆದ್ದಾರಿ ಪ್ರಾಧಿಕಾರದಿಂದ ನಿರ್ಮಿಸಿರುವ ಬೈ ಪಾಸ್ ರಸ್ತೆಯನ್ನು ಇಂದು ಲೋಕಸಭಾ ಸದಸ್ಯ ಇ.ತುಕರಾಂ ವಾಹನ ಸಂಚಾರಕ್ಕೆ ಮುಕ್ತಗೊಳಿಸಿದರು.

***************

ಕೇಂದ್ರ ಸರ್ಕಾರದ ಮಹತ್ವಕಾಂಕ್ಷೆಯ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ದಾವಣಗೆರೆ ಜಿಲ್ಲೆ ಹರಿಹರ ತಾಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ ಪ್ರಸಕ್ತ ಸಾಲಿಗೆ ಹೊಸದಾಗಿ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಇಚ್ಛಿಸುವ ರೈತರಿಗೆ ಸಹಾಯ ಧನ ನೀಡಲಾಗುತ್ತಿದ್ದು, ಆಸಕ್ತ ರೈತರು ಇದರ ಸದುಪಯೋಗ ಪಡೆದುಕೊಳ್ಳಲು ತೋಟಗಾರಿಕಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

*******ಮುಕ್ತಾಯ*******